ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) :–

ಅ) ವಸತಿಗೃಹಗಳ ಸಂಖ್ಯೆ 06 ಹಾಗೂ ಅವುಗಳು ಆಸ್ಟಿನ್ ಬಡಾವಣೆಯಲ್ಲಿರುತ್ತವೆ, ನಿವಾಸಿಗಳ ಹೆಸರು ವಿಳಾಸ ಈ ಕೆಳಕಂಡಂತಿರುತ್ತವೆ.

1) ಶ್ರೀ ಎ. ಕೆ. ಕರಪ್ಪನವರ್, ಉಪಕಾರ್ಯದರ್ಶಿ–1 ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು–20.

2) ಶ್ರೀ ರಬೀಂದ್ರ, ವಿಶೇಷ ಭೂಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು–20.

3) ಶ್ರೀ ಎಂ.ಎನ್. ನರೇಂದ್ರರಾಜ ಅರಸ್, ಉಪ–ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು–20.

4) ಶ್ರೀ ಮಹಮದ್ ಅಲಿ, ಮೇಲ್ವಿಚಾರಕರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು–20

5) ಶ್ರೀ ಜಯಕಾಂತ್ ಕೆ. ಮೇಲ್ವಿಚಾರಕರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು–20

6) ಶ್ರೀ ವೆಂಕಟರಮಣಪ್ಪ, ಉಪನಿರ್ದೇಶಕರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು–20.

ಆ) ಸದರಿ ವಸತಿ ಗೃಹಗಳಲ್ಲಿ ವಾಸವಾಗಿರುವವರ ಪೈಕಿ ಯಾರಿಗೂ ಸ್ವಂತ ಮನೆ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ :– ಶಿವಮೊಗ್ಗ ನೀರು ಸರಬರಾಜು ಯೋಜನೆ.

ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ 616 (915)

ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) :– ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ಶಿವಮೊಗ್ಗ ನೀರು ಸರಬರಾಜು ಯೋಜನೆಯನ್ನು ಹಿಂದಿನ ಮುಖ್ಯಮಂತ್ರಿಗಳು ಅಡಿಗಲ್ಲು ಸಮಾರಂಭ ನಡೆಸಿಕೊಟ್ಟಿದ್ದು ಕಾರ್ಯ ಇನ್ನೂ ಪ್ರಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಸದರಿ ಕೆಲಸ ಯಾವಾಗ ಪ್ರಾರಂಭವಾಗುತ್ತದೆ ಹಾಗೂ ಯೋಜನೆ ಪೂರ್ಣವಾಗಲು ಬೇಕಾಗುವ ಹಣ ಎಷ್ಟು ?

3) ಸದರಿ ಯೋಜನೆ ಪೂರ್ಣಗೊಳ್ಳಲು ಬೇಕಾಗುವ ಸಮಯವೆಷ್ಟು ?

ಶ್ರೀ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :–

1) ಹೌದು.

2) ಈ ಯೋಜನೆಯ ಕೆಲಸವನ್ನು ಜನವರಿ 1991 ರಿಂದ ಪ್ರಾರಂಭಿಸಲಾಗುವುದು. ಈ ಯೋಜನೆಗೆ ರೂ. 500 ಲಕ್ಷ ಬೇಕಾಗುತ್ತದೆ.

3) ಈ ಯೋಜನೆ ಪ್ರಾರಂಭಿಸಿದಂದಿನಿಂದ ಮೂರು ವರ್ಷಗಳಲ್ಲಿ ಪೂರ್ಣಗೊಳಿಸಲಾಗುವುದು.

ವಿಷಯ :– ಶಿವಮೊಗ್ಗದ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 617 (913)

ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) :– ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಶಿವಮೊಗ್ಗಕ್ಕೆ ವಿಶ್ವ ಆನುದಾನ ಯೋಜನೆಯಿಂದ ಹಣ ಮಂಜೂರು ಆಗಿದೆಯೇ ?

ಆ) ಈ ಯೋಜನೆಗೆ ದೊರೆಯುವ ಅನುದಾನದ ಹಣ ಎಷ್ಟು ?

ಇ) ಶಿವಮೊಗ್ಗದ ಯಾವ ಪ್ರದೇಶದಲ್ಲಿ ಆ ಯೋಜನೆಗೆ ಪ್ರಯತ್ನ ನಡೆದಿದೆ ?

ಈ) ಅದನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವಾಗ ಮುಕ್ತಾಯಗೊಳಿಸಲಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು) :–

ಆ) ಹೌದು.

ಆ) ಆನಾವರ್ತ ವೆಚ್ಚಕ್ಕಾಗಿ ರೂ. 291 ಲಕ್ಷ ಹಣವನ್ನು, ಮತ್ತು ಆವರ್ತ ವೆಚ್ಚಕ್ಕಾಗಿ, ಪ್ರತಿವರ್ಷಕ್ಕೆ ರೂ. 26–30 ಲಕ್ಷ ಹಣವನ್ನು ಒದಗಿಸಲಾಗಿದೆ.

ಇ) ಶಿವಮೊಗ್ಗ ತಾಲ್ಲೂಕಿನ ಕಲ್ಲಾಪಳ್ಳಿ ಗ್ರಾಮದ ಸರ್ವೆ ನಂಬರ್ 6 ರಲ್ಲಿನ 20 ಎಕರೆ ಜಮೀನನ್ನು ಈ ಉದ್ದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

ಈ) ಈ ಮಹಿಳಾ ಪಾಲಿಟೆಕ್ನಿಕ್‌ನ್ನು 1991–92ನೇ ಸಾಲಿನಿಂದ ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, 5 ವರ್ಷಗಳ ಅವಧಿಯಲ್ಲಿ ಇದನ್ನು ಪೂರ್ಣ ಅಭಿವೃದ್ಧಿಗೊಳಿಸಲಾಗುವುದು.

ವಿಷಯ :– ನಗರಗಳಲ್ಲಿ ಮನೆಗಂದಾಯ ನಿಗದಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 618 (912)

ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) :– ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಆ) ನಗರಗಳಲ್ಲಿ ಮನೆಗಂದಾಯ ನಿಗದಿ ಮಾಡಲು ಸರ್ಕಾರ ಯಾವುದಾದರೂ ನಿರ್ದಿಷ್ಟ ಸೂತ್ರ ಅನುಸರಿಸಲು ಯೋಚಿಸುತ್ತಿದೆಯೇ ?

ಆ) ಶೇಕಡವಾರು ಅಥವಾ ವಿಸ್ತೀರ್ಣಕ್ಕೆ ನಿಗದಿತ ಮನೆಗಂದಾಯ ಈಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :–

ಆ) ಹೌದು.

ಆ) ಮನೆ ಕಂದಾಯವನ್ನು ಕರ್ನಾಟಕ ನಗರ/ಪುರಸಭೆ ಕಾಯ್ದೆ 1964 ರನ್ವಯ ವಸೂಲಿ ಮಾಡಲಾಗುತ್ತಿದೆ. ಈಗಿರುವ ಸೂತ್ರವನ್ನು ಆಭ್ಯಸಿಸಿ ನ್ಯೂನತೆಗಳನ್ನು ಸರಿಪಡಿಸಿ, ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಅನ್ವಯವಾಗುವಂತಹ ನಿರ್ದಿಷ್ಟ ಸೂತ್ರವನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಒಂದು ಸಮಿತಿಯನ್ನು ರಚಿಸಲಾಗಿದೆ.

ವಿಷಯ :– ಪ್ರಸಕ್ತ ಸಾಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 619 (919)

ಶ್ರೀ ಬಸವರಾಜ ರಾಯರೆಡ್ಡಿ (ಯಲಬುರ್ಗಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಆ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸ್ಥಾಪಿಸಲುದ್ದೇಶಿಸಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

ಆ) ಹಾಲಿ ಇರುವ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೆ ಏರಿಸಲಾಗುವುದೋ ಅಥವಾ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲಾಗುವದೋ?

ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಆರೋಗ್ಯ ಸಚಿವರು) :–

ಆ 50 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರು ಮಾಡುವ ಗುರಿ ಇದ್ದು ಜಿಲ್ಲಾವಾರು ಹಂಚಿಕೆಯನ್ನು ಈ ಕೆಳಗೆ ಕೊಡಲಾಗಿದೆ.